"ತಿದ್ದುಪಡಿಯಾಗದ ಪ್ರತಿ/**unedited copy**, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

# ಕರ್ನಾಟಕ ವಿಧಾನ ಪರಿಷತ್ತು

**ದಿನಾಂಕ: 23ನೇ ಜುಲೈ 2019**
**ಮಂಗಳವಾರ**

## ವಿಷಯಾನುಕ್ರಮಣಿಕೆ


1. ಬಹುಮತ ಕಳೆದುಕೊಂಡಿರುವ ಸರ್ಕಾರಕ್ಕೆ ಸದನ ನಡೆಸುವ ನೈತಿಕತೆ ಇಲ್ಲ ಎಂದು ವಿರೋಧ ಪಕ್ಷದವರಿಂದ ಪ್ರತಿಭಟನೆ ಹಾಗೂ ಮುಂದುವರೆದ ಧರಣಿ

2. ಪ್ರಶ್ನೋತ್ತರಗಳು

   ದಿನಾಂಕ 22-07-2019 ಹಾಗೂ 23-07-2019ರ ಚುಕ್ಕೆ ಗುರುತಿನ ಹಾಗೂ ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳ ಮಂಡನೆ
   – ಡಾ:ಜಯಮಾಲ (ಸಭಾ ನಾಯಕರು)

3. ಗಮನ ಸೆಳೆಯುವ ಸೂಚನೆಯಡಿ ಸ್ವೀಕರಿಸಲಾದ ಸೂಚನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳ ಮಂಡನೆ
   – ಡಾ:ಜಯಮಾಲ (ಸಭಾ ನಾಯಕರು)

4. ನಿಯಮ 330ರ ಅಡಿಯಲ್ಲಿ ಸ್ವೀಕರಿಸಲಾದ ಪ್ರಸ್ತಾವಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳ ಮಂಡನೆ
   – ಡಾ:ಜಯಮಾಲ (ಸಭಾ ನಾಯಕರು)

5. ಸಾರಾಂಶ


---

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**(099) 23.07.2019 11.40 ಎಸ್‌ವಿ-ಕೆಎಸ್**

**ಕರ್ನಾಟಕ ವಿಧಾನ ಪರಿಷತ್ತು**

**ಮಂಗಳವಾರ, 23ನೇ ಜುಲೈ 2019**

**ಸದನವು ವಿಧಾನ ಸೌಧದಲ್ಲಿರುವ ವಿಧಾನ ಪರಿಷತ್ತಿನ ಸಭಾಂಗಣದಲ್ಲಿ**

**ಬೆಳಿಗ್ಗೆ 11 ಗಂಟೆ 42 ನಿಮಿಷಕ್ಕೆ ಸಮಾವೇಶಗೊಂಡಿತು.**

**ಸಭಾಪತಿ (ಶ್ರೀ ಕೆ.ಪ್ರತಾಪಚಂದ್ರ ಶೆಟ್ಟಿ) ಅವರು ಪೀಠದಲ್ಲಿ ಉಪಸ್ಥಿತರಿದ್ದರು.**

~~~~~~~

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"
~~~~~~~

**1. ಬಹುಮತ ಕಳೆದುಕೊಂಡಿರುವ ಸರ್ಕಾರಕ್ಕೆ ಸದನ ನಡೆಸುವ ನೈತಿಕತೆ ಇಲ್ಲ ಎಂದು ವಿರೋಧಪಕ್ಷದವರಿಂದ ಪ್ರತಿಭಟನೆ ಹಾಗೂ ಮುಂದುವರೆದ ಧರಣಿ**

**(ಸದನವು ಪ್ರಾರಂಭವಾದಾಗ ವಿರೋಧಪಕ್ಷವಾದ ಬಿಜೆಪಿಯ ಎಲ್ಲಾ ಮಾನ್ಯ ಸದಸ್ಯರು ಸದನದ ಬಾವಿಯಲ್ಲಿ ಧರಣಿನಿರತರಾಗಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು.)**

2. **ಪ್ರಶ್ನೋತ್ತರಗಳು**

**ದಿನಾಂಕ 22.07.2019 ಹಾಗೂ 23.07.2019ರ ಚುಕ್ಕೆ ಗುರುತಿನ ಹಾಗೂ ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳ ಮಂಡನೆ**

**ಡಾ:ಜಯಮಾಲ (ಸಭಾ ನಾಯಕರು):-** ಮಾನ್ಯ ಸಭಾಪತಿಯವರೇ,

ಅ) ದಿನಾಂಕ 22.07.2019, ಸಮೂಹ 1ರ ಚುಕ್ಕೆ ಗುರುತಿನ ಒಟ್ಟು 15 ಪ್ರಶ್ನೆಗಳ ಪೈಕಿ 14 ಪ್ರಶ್ನೆಗಳಿಗೆ ಹಾಗೂ ಲಿಖಿತ ಮೂಲಕ ಉತ್ತರಿಸುವ ಒಟ್ಟು 59 ಪ್ರಶ್ನೆಗಳ ಪೈಕಿ 37 ಪ್ರಶ್ನೆಗಳಿಗೆ ಉತ್ತರಗಳನ್ನು ಸದನದ ಮುಂದೆ ಮಂಡಿಸುತ್ತಿದ್ದೇನೆ.

ಆ) ದಿನಾಂಕ 23.07.2019ರ, ಸಮೂಹ-2ರ ಚುಕ್ಕೆ ಗುರುತಿನ ಒಟ್ಟು 15 ಪ್ರಶ್ನೆಗಳ ಪೈಕಿ 02 ಪ್ರಶ್ನೆಗಳಿಗೆ ಹಾಗೂ ಲಿಖಿತ ಮೂಲಕ ಉತ್ತರಿಸುವ ಒಟ್ಟು 76 ಪ್ರಶ್ನೆಗಳ ಪೈಕಿ 05 ಪ್ರಶ್ನೆಗಳಿಗೆ ಉತ್ತರಗಳನ್ನು ಸದನದ ಮುಂದೆ ಮಂಡಿಸುತ್ತಿದ್ದೇನೆ.

**3. ಗಮನ ಸೆಳೆಯುವ ಸೂಚನೆಯಡಿ ಸ್ವೀಕರಿಸಲಾದ ಸೂಚನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳ ಮಂಡನೆ**

**ಡಾ: ಜಯಮಾಲ (ಸಭಾ ನಾಯಕರು):-** ಮಾನ್ಯ ಸಭಾಪತಿಯವರೇ, ನಿಯಮ 72ರ ಅಡಿಯಲ್ಲಿ ಸ್ವೀಕರಿಸಲಾದ ಒಟ್ಟು 48 ಸೂಚನೆಗಳ ಪೈಕಿ 10 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸುತ್ತಿದ್ದೇನೆ.

**4. ನಿಯಮ 330ರ ಅಡಿಯಲ್ಲಿ ಸ್ವೀಕರಿಸಲಾದ ಪ್ರಸ್ತಾವಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳ ಮಂಡನೆ**

**ಡಾ:ಜಯಮಾಲ (ಸಭಾ ನಾಯಕರು):-** ಮಾನ್ಯ ಸಭಾಪತಿಯವರೇ, ನಿಯಮ 330ರ ಅಡಿಯಲ್ಲಿ ಸ್ವೀಕರಿಸಲಾದ ಒಟ್ಟು 30 ಸೂಚನೆಗಳ ಪೈಕಿ 09 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸುತ್ತಿದ್ದೇನೆ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಸಭಾಪತಿಯವರು:-** ಮಂಡಿಸಲಾಯಿತು. ಈಗ ಸದನವನ್ನು ಸಾಯಂಕಾಲ 06 ಗಂಟೆ 30 ನಿಮಿಷದವರೆಗೆ ಮುಂದೂಡಲಾಗಿದೆ.

**(ಸದನವು 11 ಗಂಟೆ 44 ನಿಮಿಷಗಳಿಗೆ ಮುಂದೂಡಲ್ಪಟ್ಟಿತು.)**

(100) 23-07-2019 07-50 ಸಿಎಸ್(ಬಿಎಸ್‌ಡಿ):ಬಿಎನ್ಎಸ್(ಕೆಎಸ್)

**(ಸದನವು ಪುನ: 7 ಗಂಟೆ 56 ನಿಮಿಷಗಳಿಗೆ ಸಮಾವೇಶಗೊಂಡಿತು)**

**(ಮಾನ್ಯ ಸಭಾಪತಿಯವರು ಪೀಠದಲ್ಲಿ ಉಪಸ್ಥಿತರಿದ್ದರು)**

**(ಈ ಹಂತದಲ್ಲಿ ವಿರೋಧ ಪಕ್ಷದ ನಾಯಕರನ್ನು ಹೊರತುಪಡಿಸಿ, ಭಾರತೀಯ ಜನತಾ ಪಕ್ಷದ ಸದಸ್ಯರೆಲ್ಲರೂ ಬಾವಿಯಲ್ಲಿ ಧರಣಿ ನಿರತರಾಗಿದ್ದರು)**

**ಶ್ರೀ ಬಸವರಾಜ ಎಸ್. ಹೊರಟ್ಟಿ:-** ಮಾನ್ಯ ಸಭಾಪತಿಯವರೇ, ವಿರೋಧ ಪಕ್ಷದ ಸದಸ್ಯರೆಲ್ಲರೂ ಬಾವಿಗೆ ಏಕೆ ಹೋಗಿದ್ದಾರೆ?

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಯವರೇ, ಸರ್ಕಾರವು ರಾಜೀನಾಮೆ ಕೊಡಬೇಕೆಂಬ ದಿಸೆಯಲ್ಲಿ ನಾವು ಬಾವಿಯಲ್ಲಿ ಇದ್ದೆವು. ಈಗ ಭಾರತೀಯ ಜನತಾ ಪಕ್ಷವು ಬಹುಮತ ಗಳಿಸಿಕೊಂಡಿದೆ, ಪರಿಸ್ಥಿತಿ ತಿಳಿಯಾಗಿದೆ. ಸಮ್ಮಿಶ್ರ ಸರ್ಕಾರ ರಾಜೀನಾಮೆ ಕೊಟ್ಟ ಹಿನ್ನೆಲೆಯಲ್ಲಿ, ನಮ್ಮ ಪಕ್ಷದ ಎಲ್ಲಾ ಸದಸ್ಯರು ಅವರ ಸ್ಥಾನಗಳಿಗೆ ಬರಬೇಕೆಂದು ವಿನಂತಿ ಮಾಡುತ್ತೇನೆ. ತಾವು ದಯಮಾಡಿ ಮುಂದಿನ ಕಾರ್ಯಕಲಾಪಗಳನ್ನು ತೆಗೆದುಕೊಳ್ಳಬೇಕೆಂಬುದು ನನ್ನ ವಿನಂತಿಯಾಗಿದೆ.

(ಗೊಂದಲ)

**(ಈ ಹಂತದಲ್ಲಿ ಭಾರತೀಯ ಜನತಾ ಪಕ್ಷದ ಸದಸ್ಯರೆಲ್ಲರೂ ಧರಣಿ ಹಿಂಪಡೆದು ತಮ್ಮ ತಮ್ಮ ಸ್ಥಾನಗಳಿಗೆ ತೆರಳಿ ಉಪಸ್ಥಿತರಾದರು)**

**5. ಸಾರಾಂಶ**

**ಸಭಾಪತಿಯವರುಃ-** ವಿಧಾನ ಪರಿಷತ್ತಿನ 138ನೇ ಅಧಿವೇಶನದಲ್ಲಿ ನಡೆದಿರುವ ಕಾರ್ಯಕಲಾಪಗಳ ವಿವರವನ್ನು ಸದನಕ್ಕೆ ತಿಳಿಸಲು ಇಚ್ಛಿಸುತ್ತೇನೆ. ಪ್ರಸ್ತುತ ಅಧಿವೇಶನವು ದಿನಾಂಕಃ

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

12-07-2019 ರಿಂದ 23-07-2019 ರವರೆಗೆ ಒಟ್ಟು 07 ದಿನಗಳು ಅಂದರೆ, 02 ಗಂಟೆ 25 ನಿಮಿಷಗಳ ಕಾಲ ನಡೆಸಲಾಗಿರುತ್ತದೆ.

ಕಳೆದ ಅಧಿವೇಶನದಿಂದೀಚೆಗೆ ನಿಧನರಾದ 16 ಗಣ್ಯರುಗಳಿಗೆ ಸದನವು ತನ್ನ ಸಂತಾಪವನ್ನು ವ್ಯಕ್ತಪಡಿಸಿತು.

ಕರ್ನಾಟಕ ವಿಧಾನ ಪರಿಷತ್ತಿನ ಹಕ್ಕುಬಾಧ್ಯತಾ ಸಮಿತಿಯ 95ನೇ ವರದಿಯನ್ನು ಹಾಗೂ ಸರ್ಕಾರಿ ಭರವಸೆಗಳ ಸಮಿತಿಯ 47ನೇ ವರದಿಯನ್ನು ಸದನದ ಮುಂದೆ ಮಂಡಿಸಲಾಯಿತು.

ಪ್ರಸ್ತುತ ಅಧಿವೇಶನದಲ್ಲಿ 812 ಪ್ರಶ್ನೆಗಳನ್ನು ಸ್ವೀಕರಿಸಿದ್ದು, ಅದರಲ್ಲಿ 150 ಪ್ರಶ್ನೆಗಳನ್ನು ಚುಕ್ಕೆ ಗುರುತಿನ ಪ್ರಶ್ನೆಗಳನ್ನಾಗಿ ಅಂಗೀಕರಿಸಿದ್ದು, 03 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು. ಇನ್ನುಳಿದ 78 ಪ್ರಶ್ನೆಗಳ ಉತ್ತರವನ್ನು ಸದನದಲ್ಲಿ ಮಂಡಿಸಲಾಯಿತು ಮತ್ತು ಲಿಖಿತ ಮೂಲಕ ಉತ್ತರಿಸುವ ಒಟ್ಟು 662 ಪ್ರಶ್ನೆಗಳ ಪೈಕಿ 334 ಪ್ರಶ್ನೆಗಳಿಗೆ ಉತ್ತರವನ್ನು ಮಂಡಿಸಲಾಯಿತು.

ನಿಯಮ 72ರಡಿಯಲ್ಲಿ 48 ಸೂಚನೆಗಳನ್ನು ಸ್ವೀಕರಿಸಿದ್ದು, 10 ಸೂಚನೆಗಳಿಗೆ ಹಾಗೂ ನಿಯಮ 330 ರಡಿಯಲ್ಲಿ 30 ಸೂಚನೆಗಳನ್ನು ಸ್ವೀಕರಿಸಿದ್ದು 09 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

ಪ್ರಸಕ್ತ ಅಧಿವೇಶನದಲ್ಲಿ 68ರ ಅಡಿಯಲ್ಲಿ ಒಂದು ಸೂಚನೆಯನ್ನು ಸ್ವೀಕರಿಸಲಾಗಿದ್ದು ಯಾವುದೇ ಚರ್ಚೆಯಾಗಿರುವುದಿಲ್ಲ.

2019-20ನೇ ಸಾಲಿಗೆ ವಿಧಾನ ಪರಿಷತ್ತಿನ ಹಾಗೂ ವಿಧಾನ ಸಭೆಯ ವಿವಿಧ ಸ್ಥಾಯಿ ಸಮಿತಿಗಳಿಗೆ ಸದಸ್ಯರನ್ನು ಚುನಾಯಿಸುವ ಪ್ರಸ್ತಾವವನ್ನು ಮಂಡಿಸಲಾಯಿತು.

ಮಾನ್ಯ ಮುಖ್ಯಮಂತ್ರಿಗಳು ವಿಧಾನ ಸಭೆಯಲ್ಲಿ ಮಂಡಿಸಿದ ವಿಶ್ವಾಸಮತ ಪ್ರಸ್ತಾವಕ್ಕೆ ಬಹುಮತ ಸಿಗದೇ ಇರುವ ಹಿನ್ನೆಲೆಯಲ್ಲಿ ಸದನವನ್ನು ಅನಿರ್ದಿಷ್ಟ ಕಾಲದವರೆಗೆ ಮುಂದೂಡಲಾಗಿದೆ.

**(ಸದನವನ್ನು ರಾಷ್ಟ್ರಗೀತೆಯೊಂದಿಗೆ ರಾತ್ರಿ 08-00 ಗಂಟೆಗೆ ಅನಿರ್ದಿಷ್ಟ ಕಾಲದವರೆಗೆ ಮುಂದೂಡಲಾಯಿತು)**

~~~~~

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"
~~~~~